**ಕರ್ನಾಟಕ ವಿಧಾನ ಪರಿಷತ್ತು**

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಇವರು ನಿಯಮ-330 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತ್‌ಗಳಲ್ಲಿನ ದೈನಂದಿನ ಆಡಳಿತಾತ್ಮಕ ಸಮಸ್ಯೆಗಳು, ಪಂಚತಂತ್ರ ತಂತ್ರಾಂಶ ವ್ಯವಸ್ಥೆಯಲ್ಲಿರುವ ಲೋಪ-ದೋಷಗಳು, ಸರ್ವರ್ ಸಮಸ್ಯೆ, ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ವೇತನ, ಸೇವಾವಧಿಗೆ ಶ್ರೇಣಿ ನಿಗದಿಪಡಿಸುವುದು, ಗ್ರಾಮ ಪಂಚಾಯತ್ ಗಾತ್ರಕ್ಕೆ ತಕ್ಕಂತೆ ಹೆಚ್ಚುವರಿ ಸಿಬ್ಬಂದಿ ಒದಗಿಸುವುದು. ಗ್ರಾಮ ಪಂಚಾಯತ್‌ಗಳಿಗೆ ಜನನ-ಮರಣ ನೊಂದಣಿ, ವಾಸ್ತವ್ಯ ದೃಢೀಕರಣ, ವಿವಾಹ ನೊಂದಣಿ ಅಧಿಕಾರಿಗಳನ್ನು ನೀಡಿ ಅನುಷ್ಠಾನ ಮಾಡುವುದು ಸೇರಿದಂತೆ ಸ್ಥಳೀಯ ಸರ್ಕಾರದ ಸಮಸ್ಯೆಗಳು ಮತ್ತು ಬೇಡಿಕೆಗಳ ಕುರಿತು.

**ಉತ್ತರ:** ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲಾದ ಸರ್ವರ್‌ಗಳಲ್ಲಿ ಯಾವುದೇ ಲೋಪದೋಷಗಳು ಈವರೆಗೆ ಕಂಡು ಬಂದಿರುವುದಿಲ್ಲ. ಕಳೆದ ಮೂರು ತಿಂಗಳ Server Utilization ವರದಿಯನ್ನು ಗಮನಿಸಿದಾಗ ಅಂತಹ ಸರ್ವರ್ ಸಮಸ್ಯೆಗಳು ಉಂಟಾಗಿರುವುದು ವರದಿಯಾಗಿರುವುದಿಲ್ಲ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯ ಸಿಬ್ಬಂದಿಗಳ ವೇತನವನ್ನು ಗ್ರಾಮ ಪಂಚಾಯತಿ ನಿಧಿಯಿಂದ ಅಂದರೆ ಸ್ವಂತ ಸಂಪನ್ಮೂಲದಿಂದ ಪಾವತಿಸುವುದು, ಪ್ರತಿಯೊಂದು ಗ್ರಾಮ ಪಂಚಾಯತಿಯ ಕರ್ತವ್ಯವಾಗಿರುತ್ತದೆ.

ಆದಾಗ್ಯೂ ರಾಜ್ಯದ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಸಂಪನ್ಮೂಲದ ಕೊರತೆಯಿಂದ ಸಮಯಕ್ಕೆ ಸರಿಯಾಗಿ ಸಿಬ್ಬಂದಿಗಳ ವೇತನ ಪಾವತಿಸದ ಕಾರಣ ರಾಜ್ಯ ಹಣಕಾಸು ಆಯೋಗದ ಅನುದಾನಡಿ ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡುವ ಅನುದಾನದಲ್ಲಿ ಭಾಗಶಃ ವೇತನಕ್ಕಾಗಿ ಪ್ರತ್ಯೇಕ ಅನುದಾನವನ್ನು ಅಂದರೆ ರೂ.811.00 ಕೋಟಿಗಳನ್ನು 4 ತ್ರೈಮಾಸಿಕ ಕಂತುಗಳಲ್ಲಿ ಬಿಡುಗಡೆ ಮಾಡುತ್ತಿದೆ. ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಇ.ಎಫ್ .ಎಂ.ಎಸ್. ಮುಖಾಂತರ ವೇತನ ಪಾವತಿ ಮಾಡಲಾಗುತ್ತಿದೆ.

ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನಕ್ಕೆ ಸಂಬಂಧಿಸಿದಂತೆ, ಪಂಚತಂತ್ರ 2.0 ತಂತ್ರಾಂಶದಲ್ಲಿ e-FMS module ಅನ್ನು ಅನುಷ್ಠಾನಗೊಳಿಸಲಾಗಿದೆ. ಸದರಿ module ಮೂಲಕ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಆನ್‌ಲೈನ್ ಮೂಲಕ ವೇತನವನ್ನು ಪಾವತಿಸಲಾಗುತ್ತಿದೆ. ಈವರೆಗೆ 46,375 ಸಿಬ್ಬಂದಿಗಳನ್ನು ನೋಂದಣಿ ಮಾಡಿಸಲಾಗಿದ್ದು, ಸದರಿ ಸಿಬ್ಬಂದಿಗಳಿಗೆ ವೇತನವನ್ನು ಆನ್‌ಲೈನ್ ಮೂಲಕ ಪಾವತಿಸಲಾಗುತ್ತಿದೆ.

ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಗ್ರಾಮ ಪಂಚಾಯತಿಯು ಪಾವತಿಸುತ್ತಿದೆ.

ಪ್ರಸ್ತುತ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ ಈ ಕೆಳಕಂಡಂತಿದೆ.

| ಕ್ರ. ಸಂ. | ಹುದ್ದೆಯ ಹೆಸರು | ದಿನಾಂಕ:01-04-2023 ರಿಂದ ದಿನಾಂಕ: 31-03-2024 ಸಾಲಿಗೆ ಪ್ರತಿ ಹುದ್ದೆಗೆ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ (ರೂ.ಗಳಲ್ಲಿ) |
|---|---|---|
| 1 | ಬಿಲ್ ಕಲೆಕ್ಟರ್ | 16738 |
| 2 | ಕ್ಲರ್ಕ್, ಕ್ಲರ್ಕ್/ಡಾಟಾ ಎಂಟ್ರಿ ಆಪರೇಟರ್ | 16738 |
| 3 | ವಾಟರ್ ಆಪರೇಟರ್ | 15051 |
| 4 | ಅಟೆಂಡೆಂಟ್ | 14415 |
| 5 | ಕ್ಲೀನರ್ಸ್ | 17561 |

ಗ್ರಾಮ ಪಂಚಾಯತಿ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯತಿಯ ನೌಕರರಾಗಿದ್ದು, ವೇತನ ಶ್ರೇಣಿ ನಿಗಧಿಪಡಿಸಲು ಸಾಧ್ಯವಾಗುವುದಿಲ್ಲ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ನ್ನು ರೂಪಿಸಲಾಗಿರುತ್ತದೆ. ಸದರಿ ನಿಯಮಗಳಲ್ಲಿ ಪ್ರತಿ ಗ್ರಾಮ ಪಂಚಾಯತಿಗೆ ಹುದ್ದೆಗಳ ಸಂಖ್ಯೆಯನ್ನು ನಿಗಧಿಪಡಿಸಿ ಆದೇಶ ಹೊರಡಿಸುವುದಾಗಿ ತಿಳಿಸಿದೆ. ಅದರಂತೆ ಹುದ್ದೆಗಳ ಸಂಖ್ಯೆಯನ್ನು ನಿಗಧಿಪಡಿಸಲು ಕ್ರಮ ವಹಿಸಲಾಗುತ್ತಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58(1-ಎ) (1) (vii) ರಲ್ಲಿ ಗ್ರಾಮ ಪಂಚಾಯತಿಗಳು ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ಅದನ್ನು ವರದಿ ಮಾಡುವುದನ್ನು ಖಚಿತಪಡಿಸಿಕೊಳ್ಳುವ ಕರ್ತವ್ಯವನ್ನು ಹೊಂದಿರುತ್ತವೆ.

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್. 02 ಎಸ್‌ಎಸ್ ಎಂ 2022, ದಿನಾಂಕ:22-02-2022 ರಲ್ಲಿ ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಜನನ ಮರಣ ನೋಂದಣಿ ಅಧಿನಿಯಮ 1969ರ ಪ್ರಕರಣ 7(1) ರನ್ವಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಿದ ಜನನ ಮತ್ತು ಮರಣ ಪ್ರಮಾಣ ಪತ್ರಗಳ ಪ್ರತಿಗಳನ್ನು ಬಾಪೂಜಿ ಸೇವಾ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ. ಇ-ಜನ್ಮ ತಂತ್ರಾಂಶದಲ್ಲಿ ಪ್ರತಿಗಳನ್ನು ವಿತರಿಸುವ ಬಗ್ಗೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಆನ್‌ಲೈನ್ ಮೂಲಕ ತರಬೇತಿಯನ್ನು ನೀಡಲಾಗಿದೆ. ಇ-ಜನ್ಮ ತಂತ್ರಾಂಶವನ್ನು ಪಂಚತಂತ್ರ 2.0 ತಂತ್ರಾಂಶದೊಂದಿಗೆ ಸಂಯೋಜನೆಗೊಳಿಸಲು ಕ್ರಮ ವಹಿಸಲಾಗುತ್ತಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕರ್ನಾಟಕ ವಿವಾಹಗಳ (ನೋಂದಣಿ ಮತ್ತು ವಿವಿಧ ನಿಬಂಧನೆಗಳು) ಕಾಯಿದೆ, 1976 (ಕರ್ನಾಟಕ ಅಧಿನಿಯಮ 2, 1984) ರ ಕಲಂ 4(1) ರಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಹಾಗೂ ಅಧಿಸೂಚನೆ ಸಂಖ್ಯೆ, WCD 100 SWW 2006, ದಿನಾಂಕ:07-11-2007 ಅನ್ನು ಮುಂದುವರಿಸಿ, ಕರ್ನಾಟಕ ಸರ್ಕಾರವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ಗ್ರಾಮ ಪಂಚಾಯತ್ ಹಂತದ ವಿವಾಹ ನೋಂದಣಾಧಿಕಾರಿಗಳನ್ನಾಗಿ ನೇಮಿಸಿದ ಅಧಿಸೂಚನೆಯನ್ನು ದಿನಾಂಕ: 16.04.2022 ರಂದು ಹೊರಡಿಸಲಾಗಿದೆ.

ಒಳಾಡಳಿತ ಇಲಾಖೆಯು ಈ ಹಿಂದೆ ದಿನಾಂಕ:04-07-1966 ರಂದು ಅಧಿಸೂಚನೆಯನ್ನು ಹೊರಡಿಸಿ ಎಲ್ಲಾ ಜಿಲ್ಲೆಯ ಸಬ್ ರಿಜಿಸ್ಟ್ರಾರ್‌ಗಳನ್ನು ವಿವಾಹ ನೋಂದಣಾಧಿಕಾರಿಗಳನ್ನಾಗಿ ನೇಮಿಸಿರುವ ಕಾರಣ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ Hindu Marriage (Karnataka) Rules 1966 & The Special Marriage Act 1954 ರ ಸೆಕ್ಷನ್ 3 ರ ಅಡಿಯಲ್ಲಿ ವಿವಾಹ ಕಾಯ್ದೆ ನೋಂದಾಣಾಧಿಕಾರಿಗಳ ಅಧಿಕಾರವನ್ನು ವಿಸ್ತರಿಸಿ ಅಧಿಸೂಚನೆ ಹೊರಡಿಸಲು ಒಳಾಡಳಿತ ಇಲಾಖೆಯ ಸಹಮತಿ ಪಡೆಯಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಒಳಾಡಳಿತ ಇಲಾಖೆಯ ಸಹಮತಿ ಸ್ವೀಕೃತವಾದ ನಂತರ ಗ್ರಾಮ ಪಂಚಾಯತಿ ಹಂತದಲ್ಲಿ ವಿವಾಹ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲು ಕ್ರಮ ವಹಿಸಲಾಗುವುದು.

ವಾಸ್ತವ್ಯ ದೃಢೀಕರಣ ಪ್ರಮಾಣ ಪತ್ರ ವಿತರಿಸುವ ವಿಷಯವು ಕಂದಾಯ ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಸಂಖ್ಯೆ:RDPR 341 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.